# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 985 |
| ಸದಸ್ಯರ ಹೆಸರು | : ಶ್ರೀ ನಿರಾಣ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : 17/12/2024 |
| ಉತ್ತರಿಸುವ ಸಚಿವರು | : ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಪುರಸಭೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಜ್ಯೂನಿಯರ್ ಪ್ರೋಗ್ರಾಮರ್ ಹುದ್ದೆಯು ವೃಂದ ಮತ್ತು ನೇಮಕಾತಿಯಲ್ಲಿದೆಯೇ; ಹಾಗಿದ್ದಲ್ಲಿ ಈಗಾಗಲೇ ಕನ್ಸಲ್ಟೆನ್ಸಿ ಗುತ್ತಿಗೆ ಆಧಾರದ ಮೇಲೆ ಸುಮಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಜ್ಯೂನಿಯರ್ ಪ್ರೋಗ್ರಾಮರ್‌ಗಳನ್ನು ಖಾಯಂಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ಮುನಿಸಿಪಾಲಿಟಿ (ಅಧಿಕಾರಿ ಮತ್ತು ನೌಕರರ ನೇಮಕಾತಿ) ನಿಯಮಗಳು 2010 ರನ್ವಯ ಜೂನಿಯರ್ ಪ್ರೋಗ್ರಾಮರ್ (ವೇತನ ಶ್ರೇಣಿ-7275-13350) ಹುದ್ದೆಗಳನ್ನು Bachelor Degree in Computer Application (BCA) or Bachelor of Science (Computer Science) ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳಿಂದ 50% ರಷ್ಟು ನೇರ ನೇಮಕಾತಿ ಹಾಗೂ ಉಳಿದ ಹುದ್ದೆಗಳನ್ನು ನಿಯೋಜನೆ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ (ಪ್ರತಿ ಲಗತ್ತಿಸಿದೆ). |
| (ಆ) | ಸದರಿ ಜ್ಯೂನಿಯರ್ ಪ್ರೋಗ್ರಾಮರ್‌ಗಳ ಕನಿಷ್ಟ ವೇತನ ಹಾಗೂ ಸೇವಾ ಭದ್ರತೆ ಇಲ್ಲದೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಇವರುಗಳನ್ನು ಸಮಾನ ಕೆಲಸ ಸಮಾನ ವೇತನದಡಿ/ನೇರ ಪಾವತಿಯಡಿ ಅಥವಾ ಖಾಯಂಗೊಳಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಕನ್ಸಲ್ಟನ್ಸಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಜೂನಿಯರ್ ಪ್ರೋಗ್ರಾಮರ್ ಗಳನ್ನು ಖಾಯಂಗೊಳಿಸಲು ಅವಕಾಶವಿರುವುದಿಲ್ಲ.<br><br>ಪ್ರಸ್ತುತ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕನ್ಸಲ್ಟನ್ಸಿ ಗುತ್ತಿಗೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ನೋಡಲ್ ಅಧಿಕಾರಿ, ಸೀನಿಯರ್ ಪ್ರೋಗ್ರಾಮರ್ ಮತ್ತು ಜೂನಿಯರ್ ಪ್ರೋಗ್ರಾಮರ್‌ಗಳಿಂದ ಸಮಾನ ಕೆಲಸಕ್ಕೆ ಸಮಾನ ವೇತನ ಸೌಲಭ್ಯ ಕಲ್ಪಿಸುವ ಕುರಿತಂತೆ ಜಂಟಿ ನಿರ್ದೇಶಕರು, ಕೆಎಂಡಿಎಸ್ ದಿನಾಂಕ:13.12.2024 ರಂದು ಪ್ರಸ್ತಾವನೆ ಸ್ವೀಕೃತವಾಗಿದ್ದು, ಪರಿಶೀಲನೆಯಲ್ಲಿರುತ್ತದೆ. |
| (ಇ) | ಕಳೆದ ಅಧಿವೇಶನದಲ್ಲಿ ಜ್ಯೂನಿಯರ್ ಪ್ರೋಗ್ರಾಮರ್‌ಗಳನ್ನು ಖಾಯಂಗೊಳಿಸಲು ಪೌರಾಡಳಿತ ನಿರ್ದೇಶನಾಲಯ/ಕೆ.ಎಂ.ಡಿ.ಎಸ್ ನಿಂದ ಯಾವುದೇ ಪ್ರಸ್ತಾವನೆ | ರಾಜ್ಯದ ಜಿಲ್ಲಾ ನಗರಾಭಿವೃದ್ಧಿ ಕೋಶಗಳು, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕನ್ಸಲ್ಟೆನ್ಸಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಮಾಹಿತಿ ತಂತ್ರಜ್ಞಾನ ಸಿಬ್ಬಂದಿ- ನೋಡಲ್ ಅಧಿಕಾರಿ / |

| | | |
|---|---|---|
| | ಸಲ್ಲಿಸಿರುವುದಿಲ್ಲವೆಂದು ತಿಳಿಸಿದ್ದು ಕಡತ ಸಂಖ್ಯೆ:ನಅಇ/64/ಇಎಂಸಿ/2022, ದಿನಾಂಕ:28.09.2022 ರಲ್ಲಿ ಈಗಾಗಲೇ ಪ್ರಸ್ತಾವನೆಯನ್ನು ಸಲ್ಲಿಸಿದ್ದು ಸದರಿ ಪ್ರಸ್ತಾವನೆಯು ಆಡಳಿತ ಮತ್ತು ಸಿಬ್ಬಂದಿ ಇಲಾಖೆ ಹಾಗೂ ಹಣಕಾಸು ಇಲಾಖೆಯಿಂದ ಅನುಮೋದನೆಯಾಗಿರುವುದು ನಿಜವೇ; ಹಾಗಿದ್ದಲ್ಲಿ ನೇಮಕಾತಿ ಆದೇಶವನ್ನು ತಡೆಹಿಡಿಯಲು ಕಾರಣಗಳೇನು? | ಸೀನಿಯರ್ ಪ್ರೋಗ್ರಾಮರ್ ಮತ್ತು ಜೂನಿಯರ್ ಪ್ರೋಗ್ರಾಮರ್‌ಗಳ ಗುತ್ತಿಗೆ ಅವಧಿಯನ್ನು ಮುಂದುವರೆಸಲು ಪೌರಾಡಳಿತ ನಿರ್ದೇಶಕರಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆಯನ್ನು ಕಡತ ಸಂಖ್ಯೆ:ನಅಇ 64 ಇಎಂಸಿ 2022 ರಲ್ಲಿ ಪರಿಶೀಲಿಸಲಾಗಿರುತ್ತದೆ.<br><br>ಈ ಪ್ರಸ್ತಾವನೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯ ಕೋರಲಾಗಿ ಸದರಿ ಇಲಾಖೆಯು ಉಮಾದೇವಿ ಪ್ರಕರಣದ ಹಿನ್ನಲೆಯಲ್ಲಿ ಗುತ್ತಿಗೆ ನೌಕರರನ್ನು ಖಾಯಂಗೊಳಿಸಲು ಅವಕಾಶ ಇರುವುದಿಲ್ಲವೆಂದು ತಿಳಿಸಿರುತ್ತಾರೆ.<br><br>ಈ ಅಂಶವನ್ನು ಆರ್ಥಿಕ ಇಲಾಖೆಯ ಅವಗಾಹನೆಗೆ ಸಲ್ಲಿಸಿ ಅಭಿಪ್ರಾಯ ಕೋರಿದ್ದು, ಸದರಿ ಇಲಾಖೆಯು ವಿಷಯದ ಕುರಿತು ಆಡಳಿತ ಇಲಾಖೆಯ ಹಂತದಲ್ಲಿಯೇ ಸೂಕ್ತ ನಿರ್ಣಯ ಕೈಗೊಳ್ಳುವಂತೆ ತಿಳಿಸಿರುತ್ತದೆ.<br><br>ಆನಂತರ ರಾಜ್ಯದ ಜಿಲ್ಲಾ ನಗರಾಭಿವೃದ್ಧಿ ಕೋಶಗಳು, ನಗರ ಸ್ಥಳೀಯ ಸಂಸ್ಥೆಗಳು ಮತ್ತು 10 ಮಹಾನಗರ ಪಾಲಿಕೆಗಳಲ್ಲಿ ಕನ್ಸಲ್ಟನ್ಸಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಮಾಹಿತಿ ತಂತ್ರಜ್ಞಾನ ಸಿಬ್ಬಂದಿ– ನೋಡಲ್ ಅಧಿಕಾರಿ / ಸೀನಿಯರ್ ಪ್ರೋಗ್ರಾಮರ್ ಮತ್ತು ಜೂನಿಯರ್ ಪ್ರೋಗ್ರಾಮರ್ ಗಳ ಗುತ್ತಿಗೆ ಅವಧಿಯನ್ನು ಮುಂದುವರೆಸಿ ಕನ್ಸಲ್ಟನ್ಸಿ ಫೀ ಅನ್ನು ಹೆಚ್ಚಿಸುವ ಪ್ರಸ್ತಾವನೆಯನ್ನು ದಿನಾಂಕ:24.03.2023 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗಿತ್ತು.<br><br>ಸಚಿವ ಸಂಪುಟದ ಅನುಮೋದನೆಯಂತೆ ಜಿಲ್ಲಾ ನಗರಾಭಿವೃದ್ಧಿ ಕೋಶ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕನ್ಸಲ್ಟನ್ಸಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ನೊಡಲ್ ಅಧಿಕಾರಿ/ಸೀನಿಯರ್ ಪ್ರೋಗ್ರಾಮರ್ ಮತ್ತು ಜೂನಿಯರ್ ಪ್ರೋಗ್ರಾಮರ್ ಗಳ ಗುತ್ತಿಗೆ |

| | | |
|---|---|---|
| | | ಅವಧಿಯನ್ನು ದಿನಾಂಕ:02.04.2023 ರಿಂದ ಅನ್ವಯವಾಗುವಂತೆ 11 ತಿಂಗಳ ಅವಧಿಗೆ ವಿಸ್ತರಿಸಲು ಹಾಗೂ ಅವರು ಪ್ರಸ್ತುತ ಪಡೆಯುತ್ತಿರುವ ಕನ್ಸಲ್ಟನ್ಸಿ ಫೀಗೆ ಅನುಗುಣವಾಗಿ 5% ಕನ್ಸಲ್ಟನ್ಸಿ ಫೀ ಅನ್ನು ಹೆಚ್ಚಿಸಲು ಪೌರಾಡಳಿತ ನಿರ್ದೇಶಕರಿಗೆ ಅಧಿಕಾರ ಪ್ರತ್ಯಾಯೋಜಿಸಿ ಅನುಮತಿ ನೀಡಲಾಗಿರುತ್ತದೆ. |

**ಸಂಖ್ಯೆ: ನಅಇ 69 ಎಲ್‌ಸಿಕ್ಯೂ 2024**

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು